ವಿಷಯ: ಕನ್ನಡ

# ರೂಪಣಾತ್ಮಕ ಪರೀಕ್ಷೆ 1

ಅಂಕಗಳು : 20

ತರಗತಿ: 9ನೇ

## KEY ANSWER

ಸಮಯ: 40 ನಿಮಿಷಗಳು

**I.**

1. ಆ) ಗುಣಸಂಧಿ

2. ಈ) ಉಂಟುಮಾಡಲಿ

3. ಅ) ತಿನ್ನನು

**II.**

1.

ಬಲಾತ್ಕಾರದಿಂದ ಕೆಲಸ ಮಾಡಿಸಿಕೊಂಡು ಶೋಷಿಸುವ ಯಜಮಾನನಂತೆ ಅರಸನು ವರ್ತಿಸಿದರೆ ಜನರು ತಿರಸ್ಕರಿಸಬಹುದು.

2.

ನವಭಾವ, ನವಜೀವನ, ನವಶಕ್ತಿ ತುಂಬಿಸುವ ಹಾಡನ್ನು ಹಾಡಬೇಕು ಎಂದು ಕವಿ ಬಯಸುವರು.

3.

ಪಂಢರಿಬಾಯಿಯವರು ನಟಿಸಿದ ಮೊದಲ ಚಿತ್ರದ ಹೆಸರು 'ವಾಣಿ'.

**III.**

1.

ಅಂಬೇರ ಬೆಟ್ಟದಲ್ಲಿ ಮೂರು ಅಂತಸ್ತಿನ ಅರಮನೆ ಇದೆ. ಈ ಅರಮನೆಯ ಆವರಣದ ಹಿಂದುಗಡೆ ಇರುವ ತಗ್ಗಿನ ಕಣಿವೆಯ ತಳದಲ್ಲೇ ಕಾಣಿಸುತ್ತದೆ ಮೀರಾಬಾಯಿಯ ದೇವಾಲಯ. ಆಕೆ ಗಿರಿಧರನಾಗರನನ್ನು ಪೂಜಿಸಿದ ಸ್ಥಳವಿದು. ಕೆಳಗಿಳಿದು ಹೋಗಿ ಗುಡಿಯನ್ನು ನೋಡಿದರೆ ಅದರ ಸೊಬಗು ಚೆನ್ನಾಗಿ ಕಾಣುತ್ತದೆ. ನಕ್ಷತ್ರಾಕೃತಿಯನ್ನು ತುಂಬಿಕೊಂಡ ಗರ್ಭಗೃಹ ಮತ್ತು ನವರಂಗಗಳಿವೆ.

2.

ಒಂದು ದಟ್ಟಕಾಡಿನಲ್ಲಿದ್ದ ಹೆಮ್ಮರದ ಹೊದರಿನಲ್ಲಿ ಮುದ್ದು ಪಾರಿವಾಳಗಳ ಜೋಡಿ ವಾಸವಾಗಿತ್ತು. ಜೋಡಿ ಪಾರಿವಾಳಗಳು ಒಮ್ಮೆ ಒಂದನ್ನೊಂದು ಹಗಲಿರುಳು ಬಿಟ್ಟಿರದೆ ಜೊತೆಗೂಡಿ ಬಾಳಿದವು. ಕಾಲಾಂತರದಲ್ಲಿ ಹೊದರಿನಲ್ಲಿ ಪುಟ್ಟ ಮರಿಗಳ ಮಧುರ ಸದ್ದು ಕೇಳಿತು. ಆ ಪುಟ್ಟ ಪಾರಿವಾಳಗಳ ಮಧುರವಾದ ಮಾತುಗಳನ್ನು ಕೇಳಿದ ಜೋಡಿ ಪಾರಿವಾಳಗಳಿಗೆ ಮತ್ತಷ್ಟು ಸಂತೋಷವಾಗುತ್ತದೆ.

**IV.**

1.

ಆಯ್ಕೆ : ಈ ವಾಕ್ಯವನ್ನು ಕಯ್ಯಾರ ಕಿಞ್ಞಣ್ಣ ರೈ ಅವರು ಸಂಪಾದಿಸಿರುವ ' ಶತಮಾನದ ಗಾನ ' ಕವನ ಸಂಕಲನದಿಂದ ಆಯ್ದ 'ಹೊಸಹಾಡು' ಎಂಬ ಪದ್ಯ ಭಾಗದಿಂದ ಆರಿಸಲಾಗಿದೆ.

ಸಂದರ್ಭ: ಈ ಮಾತನ್ನು ಕವಿ ಹೇಳಿದ್ದಾರೆ. ಜಾತಿ, ಕುಲ, ಮತ ಧರ್ಮಗಳ ಪಾಠಗಳನ್ನು ಕಡಿದೊಗೆದು ಹಾಡನ್ನು ಹಾಡಬೇಕು. ಈ ಹಾಡು ಯುಗಯುಗಗಳಾಚೆ, ಲೋಕಲೋಕಗಳಾಚೆ ಕೇಳಬೇಕು ಎಂದು ಹೇಳುವ ಸಂದರ್ಭದಲ್ಲಿ ಈ ಮಾತು ಬಂದಿದೆ.

ಸ್ವಾರಸ್ಯ : ಸಮಾಜದಲ್ಲಿರುವ ಜಾತಿ, ಕುಲ, ಮತ, ಧರ್ಮಗಳ ಪಾಠಗಳು ನಾಶವಾಗಿ ಮನುಜ ವೃತದ ಹಾಡು ಕೇಳಬೇಕು ಎಂಬ ಕವಿಯ ಭಾವನೆಯು ಸ್ವಾರಸ್ಯಕರವಾಗಿದೆ.

Downloaded from scoringtarget.com

**V.**

1.

ರಾಜನಲ್ಲಿ ಸಂಭವಿಸಬಹುದಾದ ದೋಷಗಳು ಹದಿನಾಲ್ಕು. ಅವು ನಾಸ್ತಿಕಬುದ್ಧಿ, ಸುಳ್ಳು, ಸಿಟ್ಟು, ಅನವಧಾನ, ಚಟುವಟಿಕೆಯಿಲ್ಲದೆ ಕೆಲಸವನ್ನು ತಡಮಾಡುವುದು, ಪ್ರಾಜರಾದ ಸಜ್ಜನರೊಡನೆ ಸೇರದಿರುವುದು, ಸೋಮಾರಿತನ, ಪಂಚೇಂದ್ರಿಯಗಳಿಗೆ ಅಧೀನನಾಗಿ ಇಂದ್ರಿಯ ಚಾಪಲ್ಯದಲ್ಲಿ ಮುಳುಗುವುದು, ಮಂತ್ರಿಗಳೊಡನೆ ಸಮಾಲೋಚಿಸದೆ ರಾಜ್ಯಕಾರ್ಯಗಳಲ್ಲಿ ತಾನೊಬ್ಬನೇ ನಿರ್ಧಾರವನ್ನು ತೆಗೆದುಕೊಳ್ಳುವುದು. ಅನುಭವವಿಲ್ಲದ ಅವಿವೇಕಿಗಳೊಡನೆ ಸಮಾಲೋಚಿಸುವುದು, ನಿಶ್ಚಯಿಸಿದ ಕಾರ್ಯಗಳನ್ನು ಆರಂಭಿಸದೆ ಇರುವುದು, ಮಂತ್ರಾಲೋಚನೆಯನ್ನು ರಹಸ್ಯವಾಗಿಡದೆ ಬಹಿರಂಗಪಡಿಸುವುದು, ಮಂಗಳಕರವಾದ ಶುಭಕಾರ್ಯವನ್ನು ಮಾಡದಿರುವುದು ಹಾಗೂ ಎಲ್ಲ ಶತ್ರುಗಳ ಮೇಲೂ ಏಕಕಾಲದಲ್ಲಿ ಯುದ್ಧಾರಂಭ – ಈ ಹದಿನಾಲ್ಕು ರಾಜದೋಷಗಳಿಗೆ ಅವಕಾಶವನ್ನು ಕೊಡಬೇಡ.

**VI.**

1. ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೆ

ಇದು ಒಂದು ಜನಪ್ರಿಯ ಗಾದೆ ಮಾತಾಗಿದೆ. ಮಕ್ಕಳ ವ್ಯಕ್ತಿತ್ವವನ್ನು ಹೇಗೆ ನಿರ್ಮಿಸಬೇಕು ಎಂಬುದನ್ನು ತಿಳಿಸುತ್ತದೆ. ಇಂದಿನ ಮಕ್ಕಳೇ ಮುಂದಿನ ಪ್ರಜೆಗಳು ಎಂಬ ಮಾತಿನಂತೆ ಭವಿಷ್ಯದಲ್ಲಿ ಸಮರ್ಥ ಸಮಾಜ ನಿರ್ಮಿಸುವ ವ್ಯಕ್ತಿಗಳನ್ನು ನಿರ್ಮಿಸುವುದು ತಂದೆ-ತಾಯಿ-ಹಿರಿಯರು-ನೆರೆಹೊರೆ ಹಾಗೂ ಶಿಕ್ಷಕರ ಕರ್ತವ್ಯವಾಗಿದೆ. ಆದ್ದರಿಂದ ಚಿಕ್ಕಂದಿನಿಂದಲೇ ಮಕ್ಕಳಲ್ಲಿ ಉತ್ತಮ ಆದರ ಗುಣಗಳನ್ನು, ಸೇವಾ ಮನೋಭಾವವನ್ನು, ದೇಶಪ್ರೇಮವನ್ನು ಬೆಳೆಸಬೇಕು. ಹಾಗೆ ಎಳೆ ವಯಸ್ಸಿನಿಂದಲೇ ಮಕ್ಕಳ ತಪ್ಪುಗಳನ್ನು ತಿದ್ದಿ ತೀಡಿ ಸರಿಯಾದ ಮಾರ್ಗದಲ್ಲಿ ನಡೆಯುವಂತೆ ಮಾಡದಿದ್ದಲ್ಲಿ ಆ ಮಕ್ಕಳು ಸಮಾಜಕ್ಕೆ ಕಂಟಕಪ್ರಾಯರಾಗುತ್ತಾರೆ. ಬೆಳೆದು ದೊಡ್ಡವರಾದ ಮೇಲೆ ಅಂಥವರನ್ನು ತಿದ್ದುವುದು ಕಷ್ಟವಾಗುತ್ತದೆ. ಚಿಕ್ಕವರಾಗಿದ್ದಾಗಲೇ ಕೆಲವು ಮಕ್ಕಳನ್ನು ತಿದ್ದಲು ಸಾಧ್ಯವಿರುವುದಿಲ್ಲ. ಗಿಡವಾಗಿರುವಾಗ ಬಗ್ಗಿಸಲು ಸಾಧ್ಯವಾಗದೆ ದೊಡ್ಡಮರವಾದ ಮೇಲೆ ಬಗ್ಗಿಸಿ ನೇರಮಾಡಲು ಸಾಧ್ಯವಿಲ್ಲವೋ ಹಾಗೇ ಅವರನ್ನು ತಿದ್ದುವುದು ಕಷ್ಟ. ಎಳೆವೆಯಲ್ಲಿ ಮಕ್ಕಳನ್ನು ಸರಿದಾರಿಯಲ್ಲಿ ನಡೆಯುವಂತೆ ಮಾಡಲು ಪ್ರಯತ್ನಿಸುವುದು ಪ್ರತಿಯೊಬ್ಬ ಪೋಷಕರ ಕರ್ತವ್ಯವಾಗಿದೆ ಎಂಬುವುದು ಈ ಗಾದೆಯ ಆಶಯವಾಗಿದೆ.

Downloaded from scoringtarget.com